ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಎಸಿಎ-3/ಎ3/ಸಂ.ನ/2016-17

ಜ್ಞಾನಭಾರತಿ
ಬೆಂಗಳೂರು-560 056
ದಿನಾಂಕ:10-09-2016

## ಅಧಿಸೂಚನೆ

ವಿಷಯ : 2016-17ನೇ ಶೈಕ್ಷಣಿಕ ಸಾಲಿಗೆ ವಿ.ಇ.ಟಿ ಪ್ರಥಮ ದರ್ಜೆ ಕಾಲೇಜಿಗೆ ಸಂಯೋಜನೆ ನವೀಕರಿಸುವ ಬಗೆಗೆ.

ಉಲ್ಲೇಖ: 1. ಸಮ ಸಂಖ್ಯೆಯ ಅಧಿಸೂಚನೆ ದಿನಾಂಕ:11-07-2016.

2. ಸ್ಥಳೀಯ ವಿಚಾರಣಾ ಸಮಿತಿಯ ಅಧ್ಯಕ್ಷರ ವಿವರಣೆ ದಿನಾಂಕ:21-07-2016.

* * *

2016-17ನೇ ಸಾಲಿಗೆ ಬೆಂಗಳೂರಿನ ವಿ.ಇ.ಟಿ ಪ್ರಥಮ ದರ್ಜೆ ಕಾಲೇಜಿಗೆ ಸಂಯೋಜನಾ ನವೀಕರಣದ ಅಧಿಸೂಚನೆ ದಿನಾಂಕ:11-07-2016ನ್ನು ಮುಂದುವರೆಸುತ್ತಾ, ಸದರಿ ಕಾಲೇಜಿನಲ್ಲಿ ಅಸ್ತಿತ್ವದಲ್ಲಿರುವ ಕೆಳಕಂಡ ಕೋರ್ಸಿಗೂ ಸಹ ಸಂಯೋಜನಾ ನವೀಕರಣವನ್ನು ಮುಂದುವರೆಸಲಾಗಿದೆ. ಇನ್ನುಳಿದಂತೆ ದಿನಾಂಕ:11-07-2016ರ ಅಧಿಸೂಚನೆಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

| ಕೋರ್ಸು | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| ಪಿ.ಜಿ. ಡಿಪ್ಲೊಮಾ | ಇನ್ ಬಿಸಿನೆಸ್ ಅಡ್ಮಿನಿಸ್ಟ್ರೇಷನ್ | 40 (ನಲವತ್ತು) |

ಆದೇಶದ ಮೇರೆಗೆ,
Elumalai 10/9/16
ಕುಲಸಚಿವರು

ಗೆ,

ಪ್ರಾಂಶುಪಾಲರು,
ವಿ.ಇ.ಟಿ ಪ್ರಥಮ ದರ್ಜೆ ಕಾಲೇಜು,
14ನೇ ಮುಖ್ಯರಸ್ತೆ, ಜೆ.ಪಿ.ನಗರ 2ನೇ ಹಂತ,
ಬೆಂಗಳೂರು-560 078.

ಪ್ರತಿಗಳು:

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ(ವಿಶ್ವ ವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು-1.
2) ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು-1.
3) ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-56/
4) ಉಪಕುಲಸಚಿವರು/ಸಹಾಯಕ ಕುಲಸಚಿವರು/ಅಧೀಕ್ಷಕರು ಶೈಕ್ಷಣಿಕ ವಿಭಾಗ-1/4. ಬೆಂ. ವಿ. ಬೆಂಗಳೂರು-56
5) ಅಧೀಕ್ಷಕರು, ಕಾನ್ಫಿಡೆನ್ಷಿಯಲ್ ವಿಭಾಗ, ಪರೀಕ್ಷಾ ವಿಭಾಗ, ಬೆಂ.ವಿ.ವಿ., ಬೆಂಗಳೂರು-56
6) ಸಹಾಯಕ ನಿರ್ದೇಶಕರು, ಅಂಕಿ ಅಂಶಗಳ ವಿಭಾಗ, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-1 [Aca-III:-1-2016-17]

## ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಎಸಿಎ-3/ಎ3/ಹೊ.ಕೋ.ಸಂ/VETFGC/2016-2017

ಜ್ಞಾನಭಾರತಿ
ಬೆಂಗಳೂರು-56
ದಿನಾಂಕ:09-08-2016

FGC office 13/8/16

### ಅಧಿಸೂಚನೆ

ವಿಷಯ : 2016-2017ನೇ ಸಾಲಿಗೆ ಬೆಂಗಳೂರಿನ ವಿ.ಇ.ಟಿ. ಪ್ರಥಮ ದರ್ಜೆ ಕಾಲೇಜಿಗೆ ಹೊಸ ಕೋರ್ಸನ್ನು ಸಂಯೋಜನೆ ನೀಡುವ ಬಗ್ಗೆ.

ಉಲ್ಲೇಖ: ಸರ್ಕಾರದ ಪತ್ರದ ಸಂಖ್ಯೆ ಇಡಿ:126:ಯು.ಬಿ.ವಿ.:2016 ದಿ:04-08-2016.

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 11ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರು ವಿಶ್ವವಿದ್ಯಾಲಯವು 2016-2017ನೇ ಸಾಲಿನಿಂದ ಬೆಂಗಳೂರಿನ **ವಿ.ಇ.ಟಿ. ಪ್ರಥಮ ದರ್ಜೆ ಕಾಲೇಜಿಗೆ** ಕೆಳಗೆ ನಮೂದಿಸಿರುವ ಕೋರ್ಸುಗಳನ್ನು ಹೊಸದಾಗಿ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸಂಯೋಜನೆಯನ್ನು ಮಂಜೂರು ಮಾಡಿದೆ.

| ಕೋರ್ಸು | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ.ಬಿ.ಎ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 40 (ನಲವತ್ತು) |
| ಪಿ.ಜಿ. | ಡಿಪ್ಲೊಮಾ ಇನ್ ಈ ಕಾಮರ್ಸ್ | 20 (ಇಪ್ಪತ್ತು) |

**ಷರತ್ತುಗಳು:**

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಕಾಲಕ್ಕೆ ಅನುದಾನವನ್ನು ಮಂಜೂರುಮಾಡುವುದಿಲ್ಲ. ಅದು ಶಾಶ್ವತ ಅನುದಾನ ರಹಿತ ಕೋರ್ಸು ಎಂದು ಪರಿಗಣಿಸತಕ್ಕದ್ದು.
2. ಜಾರಿಯಲ್ಲಿರುವ/ಕಾಲಕಾಲಕ್ಕೆ ಹೊರಡಿಸುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
3. ಮೇಲ್ಕಂಡ ಕೋರ್ಸಿಗೆ ವಿಶ್ವವಿದ್ಯಾಲಯದ ಅನುಮತಿ ಇಲ್ಲದೆ ವಿದ್ಯಾರ್ಥಿ ಪ್ರವೇಶವನ್ನು ಹೆಚ್ಚಿಸಬಾರದು.
4. ಸ್ಥಳೀಯ ವಿಚಾರಣಾ ಸಮಿತಿಯು ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪೂರೈಸಬೇಕು.
5. ಸದರಿ ಕೋರ್ಸಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
6. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಭೋಧಕರು ಹಾಗೂ ಭೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತ್ತಕ್ಕದ್ದು. ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರಿ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಂಡಲ್ಲಿ ಸಂಯೋಜನೆಯನ್ನು ರದ್ದುಪಡಿಸಲಾಗುವುದು.
7. ಕಾಲೇಜು/ಆಡಳಿತ ಮಂಡಳಿ ಶೇ.50ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗಧಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗಧಿಪಡಿಸುವ ಶುಲ್ಕವನ್ನು ಮಾತ್ರ ವಸೂಲುಮಾಡತಕ್ಕದ್ದು. ವಿಶ್ವವಿದ್ಯಾಲಯವು [illegible]

8. ವೈಶಾಕ V/S ರಾಜಸ್ಥಾನದ ರಾಜ್ಯ ಸರ್ಕಾರದ ಮೊಕದ್ದಮೆಗೆ ಸಂಬಂಧಿಸಿದಂತೆ, ದಿನಾಂಕ:13-8-1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿ/ವಿದ್ಯಾರ್ಥಿ, ಗಲಭೆಯನ್ನು ಉಂಟುಮಾಡುವುದಾಗಲೀ ಅಥವಾ ಯಾವುದೇ ವ್ಯಕ್ತಿಯಿಂದ(ಬೋಧಕ/ ಬೋಧಕೇತರ/ ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕಳ, ಲೈಂಗಿಕ ಕಿರುಕಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚುಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾದಗಳನ್ನು/ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು, ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು.

9. ಕಾಲೇಜು, ಕೋರ್ಸುಗಳ ಶಿಕ್ಷಣ ಕ್ರಮವನ್ನು, ವಿದ್ಯಾರ್ಥಿಗಳ ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು, ಸೇವೆಯಲ್ಲಿರುವ ಭೋಧಕರುಗಳನ್ನು ಪ್ರಾಂಶುಪಾಲರು/ಆಡಳಿತ ಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.

10. ಕಾಲೇಜು ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ, ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ಅವರಿಗೆ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.

11. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರ್‌ನ ಪೂರ್ಣವಾಗದ ಅವಧಿಯ ಭೋದನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.

12. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

13. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

*14. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.*

15. 2017-18ನೇ ಸಾಲಿಗೆ ಸದರಿ ಕೋರ್ಸುಗಳ ಸಂಯೋಜನಾ ನವೀಕರಣಕ್ಕಾಗಿ ಅರ್ಜಿಯನ್ನು ತಪ್ಪದೇ ಸಲ್ಲಿಸತಕ್ಕದ್ದು.

ಆಜ್ಞೆ ಮೇರೆಗೆ

ಕುಲಸಚಿವರು

ಗೆ,

ಪ್ರಾಂಶುಪಾಲರು,

ವಿ.ಇ.ಟಿ. ಪ್ರಥಮ ದರ್ಜೆ ಕಾಲೇಜು,

14ನೇ ಮುಖ್ಯರಸ್ತೆ, 2ನೇ ಹಂತ, ಜೆ.ಪಿ. ನಗರ, ಬೆಂಗಳೂರು-560078

<u>ಪ್ರತಿಗಳು:</u>

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ(ವಿಶ್ವ ವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಡಾ|| ಅಂಬೇಡ್ಕರ್ ವೀಧಿ, ಬೆಂಗಳೂರು-1.
2) ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು-1.
3) ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-56/
4) ಉಪಕುಲಸಚಿವರು/ಸಹಾಯಕ ಕುಲಸಚಿವರು/ಅಧೀಕ್ಷಕರು ಶೈಕ್ಷಣಿಕ ವಿಭಾಗ-1/4. ಬೆಂ. ವಿ. ಬೆಂಗಳೂರು-56
5) ಅಧೀಕ್ಷಕರು, ಕಾನ್ಫಿಡೆನ್ಶಿಯಲ್ ವಿಭಾಗ, ಪರೀಕ್ಷಾ ವಿಭಾಗ, ಬೆಂ.ವಿ.ವಿ., ಬೆಂಗಳೂರು-56
6) ಸಹಾಯಕ ನಿರ್ದೇಶಕರು, ಅಂಕಿ ಅಂಶಗಳ ವಿಭಾಗ, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-1

ಕರ್ನಾಟಕ ಸರ್ಕಾರ

ಕ್ರಮಾಂಕ: ಇಡಿ 126 ಯುಬಿವಿ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 04-08-2016

ಇಂದ
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು - 560001.

ಇವರಿಗೆ
ಕುಲಸಚಿವರು,
ಬೆಂಗಳೂರು ವಿಶ್ವವಿದ್ಯಾಲಯ,
ಬೆಂಗಳೂರು.

JGC
5/8/16

ಮಾನ್ಯರೆ,

ವಿಷಯ:- 2016-17ನೇ ಸಾಲಿನಿಂದ ಬೆಂಗಳೂರಿನ ವಿ.ಇ.ಟಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಹೊಸದಾಗಿ ವ್ಯಾಸಂಗಕ್ರಮಗಳನ್ನು ಆರಂಭಿಸಲು ಸಂಯೋಜನೆ ನೀಡುವ ಕುರಿತು.

ಉಲ್ಲೇಖ:- ತಮ್ಮ ಪತ್ರ ಸಂಖ್ಯೆ: ಎಸಿಎ-3/ಎ3/ಹೊಕಾಪ್ರ/2016-17, ದಿನಾಂಕ: 24-6-2016.

---

ವಾಸವಿ ಎಜುಕೇಷನಲ್ ಟ್ರಸ್ಟ್, ಬೆಂಗಳೂರು ವತಿಯಿಂದ 14ನೇ ಮುಖ್ಯ ರಸ್ತೆ, 2ನೇ ಹಂತ, ಜೆ.ಪಿ ನಗರ, ಬೆಂಗಳೂರು-560078 ಇಲ್ಲಿ ನಡೆಸಲಾಗುತ್ತಿರುವ ವಿ.ಇ.ಟಿ **ಪ್ರಥಮ ದರ್ಜೆ ಕಾಲೇಜಿನಲ್ಲಿ ಬಿ.ಬಿ.ಎ ಮತ್ತು ಪಿ.ಜಿ.ಡಿಪ್ಲೊಮಾ ಇನ್ ಈ-ಕಾಮರ್ಸ್ ವ್ಯಾಸಂಗಕ್ರಮಗಳನ್ನು** 2016-17ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಸಂಯೋಜನೆ ನೀಡುವ ಬಗ್ಗೆ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000 ಪ್ರಕರಣ 59(10)ರನ್ವಯ ಕಾಲೇಜಿನ ಅರ್ಜಿ, ಸ್ಥಳೀಯ ವಿಚಾರಣೆ ಸಮಿತಿಯು ವರದಿ ಹಾಗೂ ಸಿಂಡಿಕೇಟ್/ವಿದ್ಯಾವಿಷಯಕ ಪರಿಷತ್ತುಗಳ ಗೊತ್ತುವಳಿಗಳ ದಾಖಲೆಗಳೊಂದಿಗೆ ಉಲ್ಲೇಖಿತ ಪತ್ರದನ್ವಯ ಸರ್ಕಾರಕ್ಕೆ ಸಲ್ಲಿಸಲಾದ ಪ್ರಸ್ತಾವನೆಯನ್ನು ಕೂಲಂಕಷವಾಗಿ ಸಂವೀಕ್ಷಿಸಲಾಗಿದೆ.

ಸ್ಥಳೀಯ ವಿಚಾರಣೆ ಸಮಿತಿಯ ಅವಲೋಕನೆ ಮತ್ತು ತೀರ್ಮಾನಗಳು ಹಾಗೂ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಪರಿಗಣಿಸಿದ ತರುವಾಯ ಬೆಂಗಳೂರು ವಿಶ್ವವಿದ್ಯಾಲಯದ ವಿದ್ಯಾವಿಷಯಕ ಪರಿಷತ್ತು ಹಾಗೂ ಸಿಂಡಿಕೇಟ್ ಪ್ರಾಧಿಕಾರಿಗಳು ಅಂಗೀಕರಿಸಿದ ಗೊತ್ತುವಳಿಗಳ ಆಧಾರದ ಮೇಲೆ, ವಿ.ಇ.ಟಿ **ಪ್ರಥಮ ದರ್ಜೆ ಕಾಲೇಜು**, 14ನೇ ಮುಖ್ಯ ರಸ್ತೆ, 2ನೇ ಹಂತ, ಜೆ.ಪಿ ನಗರ, ಬೆಂಗಳೂರು-560 078 ಇಲ್ಲಿ ಹೊಸದಾಗಿ 2016-17ನೇ ಸಾಲಿನಿಂದ ಈ ಕೆಳಕಂಡ ಕೋರ್ಸಗಳನ್ನು ಅವುಗಳ ಮುಂದೆ ತೋರಿಸಲಾಗಿರುವ ವಿದ್ಯಾರ್ಥಿ ಪ್ರಮಾಣದೊಂದಿಗೆ ಪ್ರಾರಂಭಿಸುವ ಸಂಬಂಧ ಈ ಕೆಳಕಂಡ ಸಂಯೋಜನಾ ಷರತ್ತು/ನಿಬಂಧನೆಗಳು ಸೇರಿದಂತೆ ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಷರತ್ತುಗಳಿಗೊಳಪಟ್ಟು ಸಂಯೋಜನೆ ನೀಡುವ ಕುರಿತು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000 ಪ್ರಕರಣ 59(11) ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಶಿಫಾರಸ್ಸು ಮಾಡಲಾಗಿದೆ ಎಂದು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

| ವ್ಯಾಸಂಗಕ್ರಮ | ವಿಷಯ ಸಮೂಹ | ವಿದ್ಯಾರ್ಥಿ ಪ್ರವೇಶ ದಾಖಲಾತಿ ಪ್ರಮಾಣ |
|---|---|---|
| ಬಿ.ಬಿ.ಎ | ವಿ.ವಿ.ಪರಿನಿಯಮಾವಳಿಗಳಂತೆ | 40(ನಲವತ್ತು) |
| ಪಿ.ಜಿ.ಡಿಪ್ಲೊಮಾ | ಈ-ಕಾಮರ್ಸ್ | 20(ನಲವತ್ತು) |

ಷರತ್ತುಗಳು:-

1) ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;

2) ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3) ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4) ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
5) ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
6) ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.
7) ದಿನಾಂಕ: 13–8–1997 ರಂದು ವಿಶಾಖ v/s ರಾಜಸ್ತಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;
8) ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.
9) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;
10) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.
11) ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.
12) ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ತಮ್ಮ ನಂಬುಗೆಯ,

(ಕೆ.ಎಲ್. ಸುಬ್ರಮಣ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ-2)
04/08/16

ಪ್ರತಿ:-1) ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು – 560001.
2) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3) ಪ್ರಾಂಶುಪಾಲರು, ವಿ.ಇ.ಟಿ ಪ್ರಥಮ ದರ್ಜೆ ಕಾಲೇಜು, 14ನೇ ಮುಖ್ಯ ರಸ್ತೆ, 2ನೇ ಹಂತ, ಜೆ.ಪಿ ನಗರ, ಬೆಂಗಳೂರು–560 078